**All India Radio: Bangalore**
**National Bulletin In Kannada**
**31.07.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**31.07.2025 1.10 p.m.**

**<><><><>**

ಮುಖ್ಯಾಂಶಗಳು

1. ವಿಪಕ್ಷಗಳ ಗದ್ದಲ: ಉಭಯ ಸದನಗಳ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ
2. ಮಾಲೆಗಾಂವ್ ಸ್ಫೋಟ ಪ್ರಕರಣ: ಎಲ್ಲಾ ಆರೋಪಿಗಳನ್ನು ಖುಲಾಸೆಗೊಳಿಸಿದ ಮುಂಬೈನ ವಿಶೇಷ ಎನ್‌ಐಎ ನ್ಯಾಯಾಲಯ
3. ಬ್ಯಾಂಕಿಂಗ್ ಕಾನೂನುಗಳ ತಿದ್ದುಪಡಿ ಕಾಯ್ದೆ-೨೦೨೫ ನಾಳೆಯಿಂದ ಜಾರಿಗೆ
4. ಟೆಸ್ಟ್ ಕ್ರಿಕೆಟ್: ಸರಣಿಯ ಅಂತಿಮ ಪಂದ್ಯದಲ್ಲಿಂದು ಭಾರತ-ಇಂಗ್ಲೆಂಡ್ ಮುಖಾಮುಖಿ

<><><><>

ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷದ ಸದಸ್ಯರ ಘೋಷಣೆಗಳ ನಡುವೆ ಉಭಯ ಸದನಗಳ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ಲೋಕಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಆಂಧ್ರಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ನಾಸಾ ಮತ್ತು ಇಸ್ರೋ ಜಂಟಿಯಾಗಿ ಸಿಂಥೆಟಿಕ್ ಅಪರ್ಚರ್ ರಾಡಾರ್-ನಿಸಾರ್ ಉಪಗ್ರಹವನ್ನು ಯಶಸ್ವಿಯಾಗಿ ಉಡಾಯಿಸಿದ್ದಕ್ಕಾಗಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಬಾಹ್ಯಾಕಾಶ ವಿಜ್ಞಾನಿಗಳನ್ನು ಅಭಿನಂದಿಸಿದರು.

**ಧ್ವನಿ : ಓಂ ಬಿರ್ಲಾ (೧೯ ಸೆಕೆಂಡ್‌ಗಳು)**

ನಂತರ ಲೋಕಸಭಾಧ್ಯಕ್ಷ ಓಂ ಬಿರ್ಲಾ ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಳ್ಳಲು ಪ್ರಯತ್ನಿಸಿದರು. ಆದರೆ ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಬಿಹಾರದಲ್ಲಿ ವಿಶೇಷ ತೀವ್ರ ಪರಿಷ್ಕರಣೆಯನ್ನು ರದ್ದುಗೊಳಿಸುವುದು ಮತ್ತು ಇತರೆ ವಿಷಯಗಳಿಗೆ ಒತ್ತಾಯಿಸಿ ಸದನದ ಬಾವಿಗಿಳಿದು ಪ್ರತಿಭಟಿಸಿದರು. ಸದಸ್ಯರು ತಮ್ಮ ಸ್ಥಾನಗಳಿಗೆ ಹಿಂತಿರುಗಿ ಸದನವನ್ನು ಸುಗಮವಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವಂತೆ ಲೋಕಸಭಾಧ್ಯಕ್ಷರು ವಿನಂತಿಸಿದರು. ಆದರೆ ವಿರೋಧ ಪಕ್ಷದ ಸದಸ್ಯರು ತಮ್ಮ

ಪ್ರತಿಭಟನೆಯನ್ನು ಮುಂದುವರಿಸಿದರು. ನಂತರ ಸದನವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು. ಮತ್ತೊಂದೆಡೆ, ವಿಪಕ್ಷಗಳ ಗದ್ದಲದ ಹಿನ್ನೆಲೆಯಲ್ಲಿ ರಾಜ್ಯಸಭೆಯಲ್ಲೂ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು. ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ನಾಸಾ ಮತ್ತು ಇಸ್ರೋ ಜಂಟಿಯಾಗಿ ಸಿಂಥೆಟಿಕ್ ಅಪರ್ಚರ್ ರಾಡಾರ್-ನಿಸಾರ್ ಉಪಗ್ರಹವನ್ನು ಯಶಸ್ವಿಯಾಗಿ ಉಡಾಯಿಸಿದ್ದಕ್ಕಾಗಿ ಮೇಲ್ಮನೆಯು ವಿಜ್ಞಾನಿಗಳನ್ನು ಅಭಿನಂದಿಸಿತು. ನಾನಾ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರಾಜಕೀಯ ಪಕ್ಷಗಳಿಂದ ೧೮ ಮುಂದೂಡಿಕೆ ಸೂಚನೆಗಳನ್ನು ಸ್ವೀಕರಿಸಲಾಗಿದೆ ಎಂದು ಉಪ ಸಭಾಪತಿ ಹರಿವಂಶ್ ಹೇಳಿದರು. ಮಆದರೆ ರೂಲಿಂಗ್ ಉಲ್ಲೇಖಿಸಿ, ಆ ಸೂಚನೆಗಳನ್ನು ತಿರಸ್ಕರಿಸಲಾಯಿತು. ನಂತರ, ಶೂನ್ಯ ವೇಳೆಯನ್ನು ಕೈಗೆತ್ತಿಕೊಳ್ಳಲು ಉಪ ಸಭಾಪತಿ ಪ್ರಯತ್ನಿಸಿದರು. ಆದರೆ ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ ಪ್ರತಿಪಕ್ಷಗಳ ಸದಸ್ಯರು ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಗದ್ದಲ ಮುಂದುವರಿದಂತೆ, ಸಭಾಪತಿಗಳು ಸದನವನ್ನು ಮಧ್ಯಾಹ್ನದವರೆಗೆ ಮುಂದೂಡಿದರು.

<><><>

ಜಾರ್ಖಂಡ್‌ನ ಏಮ್ಸ್ ದಿಯೋಘರ್‌ನ ಮೊದಲ ಘಟಿಕೋತ್ಸವದಲ್ಲಿ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ಘಟಿಕೋತ್ಸವ ಸಮಾರಂಭದಲ್ಲಿ ಅವರು ೪ ಚಿನ್ನದ ಪದಕ ವಿಜೇತರು ಮತ್ತು ೫ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಿದ್ದಾರೆ. ರಾಷ್ಟ್ರಪತಿಗಳು ನಾಳೆ ಐಐಟಿ-ಐಎಸ್‌ಎಂ ಧನ್‌ಬಾದ್‌ನ ೪೫ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದು, ಅಲ್ಲಿ ಅವರು ೧೦ ಚಿನ್ನದ ಪದಕ ವಿಜೇತರು ಸೇರಿದಂತೆ ಇತರರನ್ನು ಸನ್ಮಾನಿಸಲಿದ್ದಾರೆ. ರಾಷ್ಟ್ರಪತಿ ಭೇಟಿ ಹಿನ್ನೆಲೆಯಲ್ಲಿ ದಿಯೋಘರ್, ಧನ್‌ಬಾದ್ ಮತ್ತು ರಾಂಚಿ ಸೇರಿದಂತೆ ಜಾರ್ಖಂಡ್‌ನ ಮೂರು ನಗರಗಳಲ್ಲಿ ಭದ್ರತಾ ವ್ಯವಸ್ಥೆಗಳನ್ನು ಹೆಚ್ಚಿಸಲಾಗಿದೆ.

<><><>

೨೦೦೮ ರ ಮಾಲೆಗಾಂವ್ ಸ್ಫೋಟ ಪ್ರಕರಣದ ಎಲ್ಲಾ ಆರೋಪಿಗಳನ್ನು ಮುಂಬೈನ ವಿಶೇಷ ಎನ್‌ಐಎ ನ್ಯಾಯಾಲಯವು ಇಂದು ಖುಲಾಸೆಗೊಳಿಸಿದೆ. ಅವರಲ್ಲಿ ಸಂಸದೆ ಪ್ರಜ್ಞಾ ಠಾಕೂರ್ ಮತ್ತು ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಮತ್ತು ಇತರರು ಸೇರಿದ್ದಾರೆ. ೨೦೦೮ ರ ಸೆಪ್ಟೆಂಬರ್ ೨೯ ರಂದು, ನಾಸಿಕ್‌ನ ಮಾಲೆಗಾಂವ್ ನಗರದ ಮಸೀದಿಯ ಬಳಿ ಮೋಟಾರ್

ಸೈಕಲ್‌ಗೆ ಕಟ್ಟಲಾಗಿದ್ದ ಸ್ಫೋಟಕ ಸಾಧನ ಸ್ಫೋಟಗೊಂಡಾಗ ಆರು ಜನರು ಸಾವನ್ನಪ್ಪಿದ್ದರು ಮತ್ತು ಅನೇಕರು ಗಾಯಗೊಂಡಿದ್ದರು. ಮಾಲೆಗಾಂವ್ ಸ್ಫೋಟ ಪ್ರಕರಣವು ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳದಲ್ಲಿ ದಾಖಲಾಗಿದ್ದ ಮೊದಲ ಪ್ರಕರಣವಾಗಿತ್ತು. ೨೦೧೧ರಲ್ಲಿ, ರಾಷ್ಟ್ರೀಯ ತನಿಖಾ ಸಂಸ್ಥೆ ಈ ಪ್ರಕರಣವನ್ನು ವಹಿಸಿಕೊಂಡಿತು.

<><><><>

ಬ್ಯಾಂಕಿಂಗ್ ವಲಯದಲ್ಲಿ ಆಡಳಿತ ಗುಣಮಟ್ಟವನ್ನು ಸುಧಾರಿಸುವ ಮತ್ತು ಠೇವಣಿದಾರರು ಹಾಗೂ ಹೂಡಿಕೆದಾರರಿಗೆ ವರ್ಧಿತ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಬ್ಯಾಂಕಿಂಗ್ ಕಾನೂನುಗಳ ತಿದ್ದುಪಡಿ ಕಾಯ್ದೆ-೨೦೨೫ ನಾಳೆಯಿಂದ ಜಾರಿಗೆ ಬರಲಿದೆ. ಈ ವರ್ಷದ ಏಪ್ರಿಲ್ ೧೫ ರಂದು ಅಧಿಸೂಚನೆಗೊಂಡ ಈ ಕಾಯ್ದೆಯು ಸಾರ್ವಜನಿಕ ವಲಯದ ಬ್ಯಾಂಕುಗಳಲ್ಲಿ ಲೆಕ್ಕಪರಿಶೋಧನಾ ಗುಣಮಟ್ಟವನ್ನು ಸುಧಾರಿಸಲು ಮತ್ತು ಸಹಕಾರಿ ಬ್ಯಾಂಕುಗಳಲ್ಲಿ ನಿರ್ದೇಶಕರ ಅಧಿಕಾರಾವಧಿಯನ್ನು ಹೆಚ್ಚಿಸಲು ಪ್ರಯತ್ನಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ.

<><><><>

ರಾಷ್ಟ್ರವು ಇಂದು ಮಹಾನ್ ಕ್ರಾಂತಿಕಾರಿ ಶಹೀದ್ ಉಧಮ್ ಸಿಂಗ್ ಅವರ ೮೬ನೇ ಹುತಾತ್ಮ ದಿನದಂದು ಅವರಿಗೆ ಗೌರವ ಸಲ್ಲಿಸುತ್ತದೆ. ಘದರ್ ಪಕ್ಷ ಮತ್ತು ಹಿಂದೂಸ್ತಾನ್ ಸೋಷಿಯಲಿಸ್ಟ್ ರಿಪಬ್ಲಿಕ್ ಅಸೋಸಿಯೇಷನ್‌ಗೆ ಸೇರಿದ ಅವರು, ೧೯೧೯ರಲ್ಲಿ ಅಮೃತಸರದಲ್ಲಿ ನಡೆದ ಜಲಿಯನ್ ವಾಲಾ ಬಾಗ್ ಹತ್ಯಾಕಾಂಡಕ್ಕೆ ಪ್ರತೀಕಾರವಾಗಿ ೧೯೪೦ ರ ಮಾರ್ಚ್ ೧೩ ರಂದು ಬ್ರಿಟಿಷ್ ಪಂಜಾಬ್‌ನ ಮಾಜಿ ಲೆಫ್ಟಿನೆಂಟ್ ಗವರ್ನರ್ ಮೈಕೆಲ್ ಡೈಯರ್ ಅವರನ್ನು ಹತ್ಯೆ ಮಾಡಿದ್ದರು. ಶಹೀದ್ ಉಧಮ್ ಸಿಂಗ್ ಅವರ ಹುತಾತ್ಮ ದಿನದಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಶಹೀದ್ ಉಧಮ್ ಸಿಂಗ್ ಭಾರತದ ಅಮರ ಪುತ್ರ. ಅವರ ದೇಶಭಕ್ತಿ ಮತ್ತು ಶೌರ್ಯ ಸದಾ ದೇಶದ ಜನರಿಗೆ ಸ್ಫೂರ್ತಿಯ ಸೆಲೆಯಾಗಿ ಉಳಿಯಲಿದೆ ಎಂದು ಹೇಳಿದ್ದಾರೆ.

<><><><>

ಈ ವರ್ಷದ ಡಿಸೆಂಬರ್‌ನಿಂದ ಆಸ್ಟ್ರೇಲಿಯಾದಲ್ಲಿ ೧೬ ವರ್ಷದೊಳಗಿನ ಮಕ್ಕಳು ಯೂಟ್ಯೂಬ್ ಖಾತೆ ಹೊಂದುವುದನ್ನು ನಿಷೇಧಿಸಲಾಗಿದೆ. ಆಸ್ಟ್ರೇಲಿಯಾ ಸರ್ಕಾರವು ಈಗಾಗಲೇ ೧೬

ವರ್ಷದೊಳಗಿನ ಮಕ್ಕಳು TikTok, Snapchat, Instagram, X ಮತ್ತು Facebook ಖಾತೆಗಳನ್ನು ಹೊಂದದಂತೆ ನಿಷೇಧ ಹೇರಿದೆ. ಇದೀಗ ಇ-ಸೇಫ್ಟಿ ಆಯುಕ್ತರ ಶಿಫಾರಸುಗಳನ್ನು ಅನುಸರಿಸಿ ಯೂಟ್ಯೂಬ್ ಅನ್ನು ಈ ಪಟ್ಟಿಗೆ ಸೇರಿಸಲಾಗಿದೆ. ಯೂಟ್ಯೂಬ್ ಅನ್ನು ಮುಖ್ಯವಾಗಿ ವಿಡಿಯೋ ವೇದಿಕೆಯಾಗಿ ನೋಡಲಾಗಿದ್ದರೂ, ಹಾನಿಕಾರಕ ವಿಷಯ ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುವ ಇತರೆ ಸಾಮಾಜಿಕ ಮಾಧ್ಯಮ ಅಪ್ಲಿಕೇಶನ್‌ಗಳಂತೆಯೇ ಇದು ಮಕ್ಕಳನ್ನು ಅದೇ ಅಪಾಯಗಳಿಗೆ ಒಡ್ಡುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

<><><><>

ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಆರ್.ಮಾರ್ಕೋಸ್ ಅವರು ಆಗಸ್ಟ್ ೪ರಿಂದ ಐದು ದಿನಗಳ ಕಾಲ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಪತ್ನಿ ಲೂಯಿಸ್ ಅರನೇಟಾ ಮಾರ್ಕೋಸ್, ಸಚಿವ ಸಂಪುಟದ ಸಚಿವರನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗ ಆಗಮಿಸಲಿದೆ. ಫಿಲಿಪೈನ್ಸ್ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಭಾರತಕ್ಕೆ ಮಾರ್ಕೋಸ್ ಅವರ ಮೊದಲ ಭೇಟಿ ಇದಾಗಿದೆ. ಭೇಟಿಯ ಸಂದರ್ಭದಲ್ಲಿ ಅವರು ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರನ್ನು ಭೇಟಿಯಾಗಲಿದ್ದು, ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<><><><>

ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಆಂಡರ್ಸನ್-ತೆಂಡೂಲ್ಕರ್ ಟೆಸ್ಟ್ ಸರಣಿಯ ೫ನೇ ಮತ್ತು ಅಂತಿಮ ಟೆಸ್ಟ್ ಪಂದ್ಯ ಇಂದು ಲಂಡನ್‌ನ ಓವಲ್ ಮೈದಾನದಲ್ಲಿ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩:೩೦ ಕ್ಕೆ ಪ್ರಾರಂಭವಾಗಲಿದೆ. ಪ್ರಸ್ತುತ ಸರಣಿಯಲ್ಲಿ ಭಾರತವು ೨-೧ ರಿಂದ ಹಿನ್ನಡೆಯಲ್ಲಿದೆ. ಸರಣಿ ಸಮಬಲಗೊಳಿಸಲು ಈ ಪಂದ್ಯ ಭಾರತಕ್ಕೆ ನಿರ್ಣಾಯಕವಾಗಿದೆ. ಗಾಯಗೊಂಡ ರಿಷಭ್ ಪಂತ್ ಬದಲಿಗೆ ಧ್ರುವ್ ಜುರೆಲ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ವೇಗದ ಬೌಲರ್ ಆಕಾಶ್ ದೀಪ್ ಆಡುವ ಹನ್ನೊಂದರಲ್ಲಿ ಸ್ಥಾನ ಪಡೆಯುವ ನಿರೀಕ್ಷೆ ಇದೆ. ಇನ್ನು ವೇಗಿ ಜಸ್ಪ್ರೀತ್ ಬುಮ್ರಾ ಅವರಿಗೆ ವಿಶ್ರಾಂತಿ ನೀಡುವ ಸಾಧ್ಯತೆಯಿದ್ದು, ನಾಯಕ ಶುಭಮನ್ ಗಿಲ್ ಅಂತಿಮ ತಂಡವನ್ನು ಇನ್ನೂ ಬಹಿರಂಗಪಡಿಸಿಲ್ಲ. ಇಂಗ್ಲೆಂಡ್ ತಂಡದಲ್ಲಿ ನಾಯಕ ಬೆನ್ ಸ್ಟೋಕ್ಸ್ ಪಂದ್ಯದಿಂದ ಹೊರಗುಳಿದ ಕಾರಣ, ಓಲಿ ಪೋಪ್ ತನ್ನ ತವರು ಮೈದಾನದಲ್ಲಿ ತಂಡವನ್ನು ಮುನ್ನಡೆಸಲಿದ್ದಾರೆ.

<><><><>

ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳು ಮತ್ತು ಶಿಫಾರಸುಗಳ ಕೊನೆಯ ದಿನಾಂಕವನ್ನು ಆಗಸ್ಟ್ ೧೫ ರವರೆಗೆ ವಿಸ್ತರಿಸಲಾಗಿದೆ. ಪ್ರಶಸ್ತಿಗೆ ನಾಮನಿರ್ದೇಶನಗಳನ್ನು ಆನ್‌ಲೈನ್‌ನಲ್ಲಿ ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಸ್ವೀಕರಿಸಲಾಗುತ್ತದೆ. ೨೦೨೬ ರ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಘೋಷಿಸಲಾಗುವ ಪದ್ಮ ಪ್ರಶಸ್ತಿಗಳಿಗಾಗಿ ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>